# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ352/2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : 7/11/2020

ದಿನಾಂಕ:- 07-11-2020 ರಂದು ನಡೆದ 120 ವಾರ್ಡ್ ಸಮಿತಿ ಸಭೆಯ ನಡವಳಿಗಳು

1. ವಾರ್ಡ್ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಮುನಿಲಕ್ಷ್ಮಿ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಇತರೆ ಸದಸ್ಯರು ಮತ್ತು ಕಾರ್ಯದರ್ಶಿಯವರ ಸಮ್ಮುಖದಲ್ಲಿ ಪ್ರಾರಂಭಿಸಲಾಯಿತು.
2. ಮುಖ್ಯವಾಗಿ ಮಳೆಗಾಲವು ಪ್ರಾರಂಭವಾಗುತ್ತಿರುವ ಹಿನ್ನಲೆಯಲ್ಲಿ ವಾರ್ಡ್‌ನ ಪ್ರಮುಖ ಸ್ಥಳಗಳಲ್ಲಿ ಚರಂಡಿಯಲ್ಲಿನ ಹೂಳು ತೆಗೆದು ಅದನ್ನು ವಿಲೇವಾರಿ ಮಾಡಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸೂಚಿಸಲಾಯಿತು.
3. ಕೆ.ಪಿ ಅಗ್ರಹಾರದ ಕೆಲವು ರಸ್ತೆಗಳಲ್ಲಿ ಮ್ಯಾನ್‌ಹೋಲ್‌ಗಳಿಗೆ ರಿಂಗ್‌ನ್ನು ಒದಗಿಸುವದರ ಬಗ್ಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸೂಚಿಸಲಾಯಿತು.
4. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ತಂತಿಗಳ ಮೇಲೆ ಮರಗಳ ಕೊಂಬೆಗಳು ಬೀಳುವ ಸಂಭವವಿರುವುದರಿಂದ ಅರಣ್ಯಾಧಿಕಾರಿಗಳಿಗೆ ಮರಗಳ ಕೊಂಬೆಗಳನ್ನು ತೆರವುಗೊಳಿಸುವ ಬಗ್ಗೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಅಲ್ಲಲ್ಲಿ ಬಿದ್ದಿರುವ ಮರದ ಕೊಂಬೆಗಳನ್ನು ತೆರವುಗೊಳಿಸಲು ಸೂಚಿಸಲಾಯಿತು.
5. ವಾರ್ಡ್ ವ್ಯಾಪ್ತಿಯಲ್ಲಿನ ಇಂದಿರಾ ಕ್ಯಾಂಟೀನ್ ರಸ್ತೆಯಿಂದ ಫೋರ್ಡ್ ಕಾರ್ ಶೋ ರೂಂವರೆಗೆ ರಸ್ತೆಯ ಬದಿಯಲ್ಲಿ ನಿಲ್ಲಿಸಿರುವ ವಾಹನಗಳ ಪಾರ್ಕಿಂಗ್‌ನ್ನು ನಿಷೇಧಿಸುವ ಬಗ್ಗೆ ಸಂಚಾರಿ ಪೋಲೀಸ್ ಠಾಣಾಧಿಕಾರಿಯವರಿಗೆ ಸೂಚಿಸಲಾಯಿತು.
6. ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೆಗಳು ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಆರೋಗ್ಯ ಇಲಾಖೆಯವರಿಗೆ ಸಮರ್ಪಕವಾಗಿ ಔಷಧಿ ಸಿಂಪಡಣೆ ಕಾರ್ಯಗಳನ್ನು ಕೈಗೊಳ್ಳಲು ಸೂಚಿಸಲಾಯಿತು.
7. ವಾರ್ಡ್ ವ್ಯಾಪ್ತಿಯ ಝಿಯಾನ್ ಚರ್ಚ್ ಎದುರುಗಡೆ ಇರುವ ಡೆಬ್ರಿಸ್‌ನ್ನು ತೆರವುಗೊಳಿಸಲು ಸೂಚಿಸಲಾಯಿತು.
8. ವಾರ್ಡ್ ವ್ಯಾಪ್ತಿಯಲ್ಲಿ ಗಾಂಧಿಶಿಲೆ ಈಶ್ವರ ಟೆಂಪಲ್ ಎದುರು ಹಾಗೂ ಇಂದಿರಾ ಕ್ಯಾಂಟೀನ್‌ನಿಂದ ರೈಲ್ವೆ ಕಾಂಪೌಂಡ್ ರಸ್ತೆಗಳು ದುರಸ್ಥಿಯಾಗಿದ್ದು (POTHOLE)ಗಳನ್ನು ಮುಚ್ಚಿಸಲು ಶೀಘ್ರವೇ ಕ್ರಮ ಕೈಗೊಳ್ಳುವಂತೆ ಚರ್ಚಿಸಲಾಯಿತು. ಸದರಿ ಗುತ್ತಿಗೆದಾರರು ಈ ಕಾಮಗಾರಿಯನ್ನು ನಿರ್ವಹಿಸುವಂತೆ ಸೂಚಿಸಲಾಯಿತು.
9. ಮಿಲ್ ರಸ್ತೆಯ ಸರ್ಕಲ್ ಸಹ ಕಂದಾಯ ಅಧಿಕಾರಿಯವರ ವಾರ್ಡ್ ಕಛೇರಿಯ ಕಟ್ಟಡದಲ್ಲಿರುವ ಡ್ರೈನ್‌ನ ಮೇಲ್ಭಾಗದಲ್ಲಿ ಮುಚ್ಚುವುದು ಹಾಗೂ ವಾಹನ ನಿಲ್ದಾಣ ವ್ಯವಸ್ಥೆ ಕಲ್ಪಿಸುವುದು ಶೌಚಾಲಯದ ಬಾಗಿಲುಗಳನ್ನು, ಕಾಂಪೌಂಡ್ ಗೇಟ್ ಹಾಗೂ ವಿದ್ಯುತ್ ಸಂಪರ್ಕವನ್ನು ಸರಿಪಡಿಸುವುದರ ಬಗ್ಗೆ ಚರ್ಚಿಸಲಾಯಿತು.

Scanned with CamScanner

10. ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

**ನಿರ್ಣಯ:-**

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತ್ತು.

(Signature)
ಕಾರ್ಯದರ್ಶಿ
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

K. Nilakshmi
ಅಧ್ಯಕ್ಷರು
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
3. ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕಾಟನ್‌ಪೇಟೆ ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಕಡತಕ್ಕೆ.

Scanned with CamScanner